**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 330 ರಡಿ ನೀಡಿರುವ ಸೂಚನಾ ಪತ್ರದಲ್ಲಿ ಪ್ರಸ್ತಾಪಿಸಿರುವ "ಚಿಂತಾಮಣಿ ತಾ||, ಕೋಟಗಲ್ ಗ್ರಾಮದಲ್ಲಿ ಜಿ.ಟಿ.ಬಿ. ಕ್ರಷರ್ಸ್ ರವರು ಅಕ್ರಮವಾಗಿ ಗಣಿಗಾರಿಕೆ ನಡೆಸುತ್ತಿರುವ ಬಗ್ಗೆ" ವಿಷಯ ಕುರಿತು ಸರ್ಕಾರದ ಉತ್ತರ.**

*****************************************************************************************

**ಪ್ರಶ್ನೆ:**

ಚಿಕ್ಕಬಳ್ಳಾಪುರ ಜಿಲ್ಲೆ, ಚಿಂತಾಮಣಿ ತಾಲ್ಲೂಕು, ಕೋಟಗಲ್ ಗ್ರಾಮದ ಸರ್ವೆ ನಂ.11 ರಲ್ಲಿ ಜಿ.ಟಿ.ಬಿ ಕ್ರಷರ್ಸ್ ಇವರು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳೊಂದಿಗೆ ಷಾಮೀಲಾಗಿ ಕಾನೂನು ಬಾಹಿರವಾಗಿ, ಅಕ್ರಮ ಗಣಿಗಾರಿಕೆಯಲ್ಲಿ ತೊಡಗಿಕೊಂಡು, ಸರ್ಕಾರ ನೀಡಿದ ಮಂಜೂರಾತಿಗಿಂತ ಹೆಚ್ಚು ಗಣಿಗಾರಿಕೆ ನಡೆಸುವ ಮೂಲಕ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟು ಮಾಡುತ್ತಿರುವ ಗಂಭೀರ ಸಮಸ್ಯೆ ಕುರಿತು ಕಳೆದ ಅಧಿವೇಶನದಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು, ಡ್ರೋಣ್ ಸರ್ವೆ ನಡೆಸಿ, ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳುವುದಾಗಿ ಸದನಕ್ಕೆ ಭರವಸೆ ನೀಡಿದ್ದರು. ಆದರೆ ಈ ಸಂಬಂಧ ಇದುವರೆವಿಗೂ ಯಾವುದೇ ಕ್ರಮ ವಹಿಸದೆ ಇರುವುದರಿಂದ ಉಂಟಾದ ಗಂಭೀರ ಸಮಸ್ಯೆ ಕುರಿತು ಮಾನ್ಯ ಗಣಿ ಮತ್ತು ಭೂವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರಲ್ಲಿ ಪ್ರಸ್ತಾಪಿಸಬಯಸುತ್ತೇನೆ.

**ಉತ್ತರ:**

ಚಿಕ್ಕಬಳ್ಳಾಪುರ ಜಿಲ್ಲೆ, ಚಿಂತಾಮಣಿ ತಾಲ್ಲೂಕು, ಕೋಟಗಲ್ ಗ್ರಾಮದ ಸರ್ವೆ ನಂ.11 ರಲ್ಲಿನ 05-00 ಎಕರೆ ಪ್ರದೇಶದಲ್ಲಿ ಶ್ರೀಮತಿ ಹೆಚ್.ಕೆ.ಸಾವಿತ್ರಿ ಪ್ರೊ:: ಮೆ|| ಜಿ.ಟಿ.ಬಿ ಕ್ರಷರ್ಸ್ ರವರಿಗೆ ಕಟ್ಟಡ ಕಲ್ಲು ಗಣಿಗಾರಿಕೆಗಾಗಿ ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994 ರಂತೆ ಕಂದಾಯ ಮತ್ತು ಅರಣ್ಯ ಇಲಾಖೆಯ ನಿರಾಕ್ಷೇಪಣಾ ಪತ್ರಗಳು, ಪರಿಸರ ಅನುಮತಿ ಪತ್ರ ಪಡೆದು ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯ ಅನುಮೋದನೆಯೊಂದಿಗೆ ದಿನಾಂಕ 10.07.2017 ರಿಂದ ಜಾರಿಗೆ ಬರುವಂತೆ 20 ವರ್ಷಗಳ ಅವಧಿಗೆ ಕಲ್ಲುಗಣಿ ಗುತ್ತಿಗೆ ಸಂಖ್ಯೆ 260 ನ್ನು ಮಂಜೂರು ಮಾಡಲಾಗಿರುತ್ತದೆ.

ದಿನಾಂಕ 12.08.2022 ರಂದು ಸದರಿ ಕಲ್ಲುಗಣಿ ಗುತ್ತಿಗೆ ಪ್ರದೇಶದಲ್ಲಿ ತೆಗೆದಿರುವ ಉಪಖನಿಜದ ಪ್ರಮಾಣವನ್ನು ಅಂದಾಜಿಸಲು ಹಿರಿಯ ಭೂವಿಜ್ಞಾನಿ, ಚಿಕ್ಕಬಳ್ಳಾಪುರ ಕಛೇರಿಯ ತಾಂತ್ರಿಕ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ಸಮಕ್ಷಮದಲ್ಲಿ ಡ್ರೋಣ್ ಸರ್ವೆ ಕಾರ್ಯ ನಡೆಸಲಾಗಿರುತ್ತದೆ. ಡ್ರೋಣ್ ಸರ್ವೆ ಕಾರ್ಯದ ವರದಿಯಂತೆ, ಗುತ್ತಿಗೆ ಪ್ರದೇಶದಲ್ಲಿ 136245 ಮೆಟ್ರಿಕ್ ಟನ್ ಕಟ್ಟಡ ಕಲ್ಲು ತೆಗೆದಿರುವುದು ಕಂಡುಬಂದಿದ್ದು, ಈ ಪೈಕಿ ಗುತ್ತಿಗೆ ಪ್ರದೇಶದ ಮೇಲ್ಭಾಗದಲ್ಲಿ ಸುಮಾರು 13625 ಮೆಟ್ರಿಕ್ ಟನ್ ಶಿಥಿಲ ಗ್ರಾನೈಟ್ ಶಿಲೆ / ಮಣ್ಣಿನ ಒವರ್ ಬರ್ಡನ್ ಆಗಿರುತ್ತದೆ.

ಕಲ್ಲುಗಣಿ ಗುತ್ತಿಗೆದಾರರು ಗುತ್ತಿಗೆ ಮಂಜೂರಾದ ದಿನಾಂಕದಿಂದ 80083 ಮೆಟ್ರಿಕ್ ಟನ್ ಪ್ರಮಾಣಕ್ಕೆ ರಾಜಧನ ಪಾವತಿಸಿ ಖನಿಜ ರವಾನೆ ಪರವಾನಿಗೆ ಪಡೆದು ಸಾಗಾಣಿಕೆ ಮಾಡಿರುವುದು ಆಡಿಟ್ ವರದಿಗಳಿಂದ ಕಂಡುಬಂದಿರುತ್ತದೆ. ಗುತ್ತಿಗೆದಾರರು ಸಂಚಿತ ಆಡಿಟ್ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ 42537 ಮೆಟ್ರಿಕ್ ಟನ್ ಕಟ್ಟಡ ಕಲ್ಲನ್ನು ಖನಿಜ ರವಾನೆ ಪರವಾನಿಗೆ ಪಡೆಯದೆ ನಿಯಮ ಉಲ್ಲಂಘಿಸಿ ಸಾಗಾಣಿಕೆ ಮಾಡಿರುವುದು –

. . . 2

-ಕಂಡುಬಂದಿದ್ದು, ಸದರಿ ಪ್ರಮಾಣಕ್ಕೆ ಪ್ರಸ್ತುತ ಚಾಲ್ತಿಯಲ್ಲಿರುವ ರಾಜಧನ ₹ 70/- ಪ್ರತಿ ಮೆಟ್ರಿಕ್ ಟನ್ ರಂತೆ 05 ಪಟ್ಟು ದಂಡ ₹1,48,87,950/- ಗಳನ್ನು ವಿಧಿಸಿ, ಪಾವತಿಸುವಂತೆ ಸೂಚಿಸಿ ದಿನಾಂಕ 17.08.2022 ರಂದು ಗುತ್ತಿಗೆದಾರರಿಗೆ ನೋಟೀಸ್ ಜಾರಿ ಮಾಡಿದ್ದು, ಸಂಗ್ರಹಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ.

ಮುಂದುವರೆದು, ಕಲ್ಲುಗಣಿ ಗುತ್ತಿಗೆದಾರರು ಗುತ್ತಿಗೆ ಪ್ರದೇಶದಲ್ಲಿ ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರದಲ್ಲಿನ ಷರತ್ತುಗಳನುಸಾರ 7.5 ಮೀಟರ್ ಮಾರ್ಜಿನ್ ಹಾಗೂ ಬೆಂಚುಗಳನ್ನು ನಿಯಮಬದ್ಧವಾಗಿ ನಿರ್ವಹಿಸದೆ ಗಣಿಗಾರಿಕೆ ನಡೆಸುತ್ತಿರುವುದು ಹಾಗೂ ಸುರಕ್ಷತೆಗಾಗಿ ತಂತಿಬೇಲಿ ನಿರ್ವಹಿಸದಿರುವುದು ಕಂಡುಬಂದ ಹಿನ್ನಲೆಯಲ್ಲಿ, ಸದರಿ ನ್ಯೂನತೆಗಳನ್ನು ಸರಿಪಡಿಸಿಕೊಳ್ಳುವವರೆಗೆ ಸದರಿ ಗುತ್ತಿಗೆ ಪ್ರದೇಶದಲ್ಲಿ ಕಲ್ಲುಗಣಿಗಾರಿಕೆಯನ್ನು ಸ್ಥಗಿತಗೊಳಿಸಲು ಗುತ್ತಿಗೆದಾರರಿಗೆ ಸೂಚಿಸಿ ದಿನಾಂಕ 02.09.2022 ರಂದು ನೋಟೀಸ್ ಜಾರಿ ಮಾಡಲಾಗಿರುತ್ತದೆ.

ಸಂಖ್ಯೆ ಸಿಐ-ಎಂಎಂಎನ್/352/2022

Halappa A.

**(ಆಚಾರ್ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು
ವಿಕಲಚೇತನರ, ಹಿರಿಯ ನಾಗರಿಕರ
ಸಬಲೀಕರಣ ಸಚಿವರು.

(5) -330 Busi - 13/9